# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ .ರಿಸರ್ಚ್ ಅಂಡ್ ಚಾರಿಟಬಲ್ ಟ್ರಸ್ಟ್(ರಿ), 172, ಶ್ರೀ ಗಂಗಾ ನಿವಾಸ, ಸಿಂಗಾಪುರ ಪ್ಯಾರಡೈಸ್, ವಿದ್ಯಾರಣ್ಯಪುರ ಅಂಚೆ, ಬೆಂಗಳೂರು-560 097 ಇವರಿಗೆ 2013-2014ನೇ ಸಾಲಿನಿಂದ ಶಾಶ್ವತ ಅನುದಾನರಹಿತವಾಗಿ ಹೊಸದಾಗಿ ಖಾಸಗಿ ಸ್ವತಂತ್ರ ಪದವಿ ಪೂರ್ವ ಕಾಲೇಜನ್ನು ಪ್ರಾರಂಭಿಸಲು ಅನುಮತಿ ನೀಡುವ ಬಗ್ಗೆ.

ಓದಲಾಗಿದೆ:- ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ ಬೆಂಗಳೂರು ರವರ ಪತ್ರ ಸಂಖ್ಯೆ:ಪಪೂಶಿ/ಸಿಬ್ಬಂದಿ-3/ಮಾನ್ಯತೆ/ಎಂಸಿ/ಹೊಕಾ/2012-13 ದಿನಾಂಕ:04-02-2013.

* * *

**ಪ್ರಸ್ತಾವನೆ :-**

ಶ್ರೀ ರಿಸರ್ಚ್ ಅಂಡ್ ಚಾರಿಟಬಲ್ ಟ್ರಸ್ಟ್(ರಿ), 172, ಶ್ರೀ ಗಂಗಾ ನಿವಾಸ, ಸಿಂಗಾಪುರ ಪ್ಯಾರಡೈಸ್, ವಿದ್ಯಾರಣ್ಯಪುರ ಅಂಚೆ, ಬೆಂಗಳೂರು-560 097 ಇವರು ಶ್ರೀ ಪದವಿ ಪೂರ್ವ ಕಾಲೇಜು, ನಗರಗೆರೆ, ಗೌರೀಬಿದನೂರು ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ ಇಲ್ಲಿ ಶಾಶ್ವತ ಅನುದಾನರಹಿತವಾಗಿ ಹೊಸ ಖಾಸಗಿ ಸ್ವತಂತ್ರ ಪದವಿ ಪೂರ್ವ ಕಾಲೇಜನ್ನು ಪ್ರಾರಂಭಿಸಲು ಸರ್ಕಾರದ ಮಂಜೂರಾತಿ ನೀಡುವಂತೆ ಕೋರಿರುವ ಹಿನ್ನೆಲೆಯಲ್ಲಿ, ಜಿಲ್ಲಾ ಅಧಿಕೃತ ತಪಾಸಣಾ ಸಮಿತಿಯು ಸ್ಥಳ ತನಿಖೆ ನಡೆಸಿ, ಸದರಿ ಸಂಸ್ಥೆಗೆ ಹೊಸ ಖಾಸಗಿ ಪದವಿ ಪೂರ್ವ ಕಾಲೇಜನ್ನು ಪ್ರಾರಂಭಿಸಲು ಶಿಫಾರಸ್ಸು ಮಾಡಬಹುದೆಂದು ವರದಿ ಸಲ್ಲಿಸಿರುತ್ತಾರೆ. ಸದರಿ ವರದಿಯನ್ನು ಪರಿಶೀಲಿಸಿ, ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು ರವರು ಸಂಸ್ಥೆಯವರು ನಿಯಮಾನುಸಾರ ಮೂಲಭೂತ ಸೌಲಭ್ಯಗಳನ್ನು ಒದಗಿಸಿಕೊಂಡಿಲ್ಲವಾದ್ದರಿಂದ_ ಪ್ರಸ್ತಾವನೆಯನ್ನು ತಿರಸ್ಕರಿಸುವಂತೆ ಮೇಲೆ ಓದಲಾದ ಪ್ರಸ್ತಾವನೆಯಲ್ಲಿ ಶಿಫಾರಸ್ಸು ಮಾಡಿರುತ್ತಾರೆ.

ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆರವರ ಪ್ರಸ್ತಾವನೆಯನ್ನು ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರಿ ಆದೇಶ ಸಂಖ್ಯೆ: ಇಡಿ 275 ಎಸ್‌ಹೆಚ್‌ಹೆಚ್ 2013, ಬೆಂಗಳೂರು, ದಿನಾಂಕ 13ನೇ ಮಾರ್ಚ್ 2013.

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ, ಶ್ರೀ ರಿಸರ್ಚ್ ಅಂಡ್ ಚಾರಿಟಬಲ್ ಟ್ರಸ್ಟ್(ರಿ), 172, ಶ್ರೀ ಗಂಗಾ ನಿವಾಸ, ಸಿಂಗಾಪುರ ಪ್ಯಾರಡೈಸ್, ವಿದ್ಯಾರಣ್ಯಪುರ ಅಂಚೆ, ಬೆಂಗಳೂರು-560 097 ಇವರಿಗೆ ಶ್ರೀ ಪದವಿ ಪೂರ್ವ ಕಾಲೇಜು, ನಗರಗೆರೆ, ಗೌರೀಬಿದನೂರು ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ ಇಲ್ಲಿ 2013-2014ನೇ ಶೈಕ್ಷಣಿಕ ಸಾಲಿನಿಂದ ಹೊಸ ಖಾಸಗಿ ಶಾಶ್ವತ ಅನುದಾನರಹಿತ ಸ್ವತಂತ್ರ ಪದವಿ ಪೂರ್ವ ಕಾಲೇಜನ್ನು ಪ್ರಾರಂಭಿಸಲು, _ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಸರ್ಕಾರದ ಮಂಜೂರಾತಿ ನೀಡಲಾಗಿದೆ.

### ಷರತ್ತುಗಳು

1) ಮಂಜೂರಾತಿಯು ಶಾಶ್ವತ ಅನುದಾನರಹಿತ (ಪರ್ಮನೆಂಟಲೀ ವಿಥೌಟ್ ಗ್ರಾಂಟ್ ಇನ್ ಏಯ್ಡ್) ಷರತ್ತಿಗೆ ಒಳಪಟ್ಟಿದೆ ( Permanently Without Grant-in-Aid )

2) ಆಡಳಿತ ಮಂಡಳಿಯವರು ಕಾಲೇಜಿಗೆ ಅಗತ್ಯವಾದ ಕಟ್ಟಡ, ಪ್ರಯೋಗಾಲಯ, ಪಾಠೋಪಕರಣ, ಪೀಠೋಪಕರಣ, ಆಟದ ಮೈದಾನ, ಗ್ರಂಥಾಲಯ, ಹಾಗೂ ಇತರೆ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಕಾಲೇಜು ಪ್ರಾರಂಭಿಸುವ

ಸಮಯದೊಳಗೆ ಒದಗಿಸಿಕೊಳ್ಳತಕ್ಕದ್ದು. ಇದನ್ನು ನಿಯಮಾನುಸಾರ ಪರಿಶೀಲಿಸಿ ದೃಢೀಕರಿಸಿಕೊಂಡು ನಂತರವೇ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ ರವರು ಶೈಕ್ಷಣಿಕ ಮಾನ್ಯತೆ ನೀಡತಕ್ಕದ್ದು.

3) ಆಡಳಿತ ಮಂಡಳಿಯವರು ಸರ್ಕಾರಕ್ಕೆ ಪಾವತಿ ಮಾಡಬೇಕಾದ ಸ್ಥಿರನಿಧಿ ಶುಲ್ಕ ಹಾಗೂ ಇತರೆ ಮೊಬಲಗುಗಳನ್ನು ಸರ್ಕಾರದ ಲೆಕ್ಕಕ್ಕೆ ಜಮಾ ಮಾಡತಕ್ಕದ್ದು.

4) ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭಿಸುವ ಮೊದಲು ಅಗತ್ಯ ಮೂಲಭೂತ ಸೌಲಭ್ಯಗಳನ್ನು ಸಂಪೂರ್ಣವಾಗಿ ಒದಗಿಸಿ ಕೊಳ್ಳತಕ್ಕದ್ದು.

5) ಯಾವುದೇ ಕಾರಣಕ್ಕೂ ಸ್ಥಳ ಬದಲಾವಣೆಗೆ ಅವಕಾಶ ಇರುವುದಿಲ್ಲ.

6) ಸರ್ಕಾರದ ಜಾರಿಯಲ್ಲಿರುವ ಎಲ್ಲಾ ಆದೇಶಗಳನ್ನು ಹಾಗೂ ನಿಯಮಗಳನ್ನು ಪಾಲಿಸತಕ್ಕದ್ದು.

7) ಕರ್ನಾಟಕ ಶಿಕ್ಷಣ ಕಾಯ್ದೆ 1983ರ ನಿಯಮಗಳನ್ನು ತಪ್ಪದೆ ಪಾಲಿಸತಕ್ಕದ್ದು.

8) ಈ ಆಡಳಿತ ಮಂಡಳಿಯವರು ಸರ್ಕಾರದಿಂದ ಯಾವುದೇ ಅನುದಾನವನ್ನು ಬಯಸುವುದಿಲ್ಲವೆಂದು ಹಾಗೂ ಶಾಶ್ವತ ಅನುದಾನರಹಿತವಾಗಿ ನಡೆಸುತ್ತೇವೆಂದು ರೂ.200-00 ಗಳ Document Sheet ನಲ್ಲಿ ನೋಟರಿಯವರ ಮುಂದೆ ಪ್ರಮಾಣೀಕರಿಸಿದ ಒಪ್ಪಿಗೆ ಪತ್ರವನ್ನು ಕೊಡತಕ್ಕದ್ದು.

9) ಈ ಮಂಜೂರಾತಿ ಆದೇಶವು ಕಾಲೇಜನ್ನು ಪ್ರಾರಂಭಿಸಲು ಅನುಮತಿ ಮಾತ್ರ ಆಗಿರುತ್ತದೆ.

10) ಶೈಕ್ಷಣಿಕ ಅನುಮೋದನೆ ಪಡೆಯದೇ ವಿದ್ಯಾರ್ಥಿಗಳನ್ನು ದಾಖಲು ಮಾಡಿ ಕೊಳ್ಳಬಾರದು.

11) ದಿನಾಂಕ:09-10-2006ರ ಸರ್ಕಾರದ ಅಧಿಸೂಚನೆ ಸಂಖ್ಯೆ. ಇಡಿ 136 ಟಿಪಿಯು 99 ರಲ್ಲಿ ವಿಧಿಸಿರುವ ಷರತ್ತು/ನಿಬಂಧನೆಗಳನ್ನು ಪಾಲಿಸತಕ್ಕದ್ದು.

ಈ ಮೇಲಿನ ಷರತ್ತುಗಳನ್ನು ಪಾಲಿಸದಿದ್ದಲ್ಲಿ ಮಂಜೂರಾತಿ ಆದೇಶವನ್ನು ರದ್ದು ಪಡಿಸಲಾಗುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ.

13/03/13

(ಎಸ್.ಹೆಚ್.ಕುರಿಯವರ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ(ಪದವಿ ಪೂರ್ವ ಶಿಕ್ಷಣ).

ಇವರಿಗೆ:-

1. ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, 18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು-560 001.
2. ಉಪ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಚಿಕ್ಕಬಳ್ಳಾಪುರ ಜಿಲ್ಲೆ, ಚಿಕ್ಕಬಳ್ಳಾಪುರ.
3. ಅಧ್ಯಕ್ಷರು/ಕಾರ್ಯದರ್ಶಿಗಳು, ಶ್ರೀ ರಿಸರ್ಚ್ ಅಂಡ್ ಚಾರಿಟಬಲ್ ಟ್ರಸ್ಟ್(ರಿ), 172, ಶ್ರೀ ಗಂಗಾ ನಿವಾಸ, ಸಿಂಗಾಪುರ ಪ್ಯಾರಡೈಸ್, ವಿದ್ಯಾರಣ್ಯಪುರ ಅಂಚೆ, ಬೆಂಗಳೂರು-560 097.
4. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.